KATK900005432025

**5 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ತಿಪಟೂರು.**

**ಎಸ್.ಸಿ ಸಂಖ್ಯೆ:** 10030/2025

**ಪ್ರಮಾಣೀಕರಿಸಿದ ದಿನಾಂಕಃ** 02.07.2026.

**ಚಾಸಾ.**3

**ಫ್ರಾಸಾ.**4

| | |
|---|---|
| ಹೆಸರು | ಸಾಬೀರ್ ಅಹಮ್ಮದ್ |
| ತಂದೆಯ ಹೆಸರು | ಮುಜಾಮಿಲ್ |
| ವಯಸ್ಸು | **35** ವರ್ಷ |
| ಉದ್ಯೋಗ | ಆಟೋ ಚಾಲಕ |
| ವಾಸಸ್ಥಳ | ಗಾಂಧೀನಗರ, ತಿಪಟೂರು |

**<u>ಮುಖ್ಯವಿಚಾರಣೆ, ಮಾನ್ಯ ಸರ್ಕಾರಿ ಅಭಿಯೋಜಕರಿಂದಃ</u>**

ಚಾಸಾ-1 ರವರ ಪರಿಚಯವಿರುವುದಿಲ್ಲ. ನ್ಯಾಯಾಲಯದ ಮುಂದಿರುವ ಆರೋಪಿತರನ್ನು ನಾನು ಎಲ್ಲಿಯೂ ನೋಡಿರುವುದಿಲ್ಲ, ಇದೇ ಮೊದಲ ಬಾರಿಗೆ ನ್ಯಾಯಾಲಯದಲ್ಲಿ ನೋಡುತ್ತಿದ್ದೇನೆ.

ಸಾಕ್ಷಿಯು ಒಂದು ದಾಖಲಾತಿಯಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲಾತಿಯನ್ನು **ನಿ.ಪಿ–11** ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ–11(ಎ) ಎಂದು ಗುರುತಿಸಲಾಯಿತು. ಸಾಕ್ಷಿಯ ನಿ.ಪಿ–5 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿ.ಪಿ–5(ಬಿ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದಿರುವ ಮುದ್ದೆಮಾಲು–1 ರಿಂದ 3 ವಸ್ತುಗಳನ್ನು ನೋಡಿ ಸಾಕ್ಷಿ ಗುರುತಿಸಿರುವುದಿಲ್ಲ. ಮುದ್ದೆಮಾಲು–1 ರಿಂದ 3 ರ ಬಟ್ಟೆಯ ಚೀಲದ ಮೇಲೆ ಅಂಟಿಸಿರುವ ಚೀಟಿಗಳ ಮೇಲೆ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನಿ.ಪಿ–6 ಮತ್ತು 7 ಫೋಟೊದಲ್ಲಿ ತಾನು ಇರುವುದರ ಬಗ್ಗೆ ನೋಡಿ ಗುರುತಿಸಿರುತ್ತಾರೆ. ಸದರಿ ನಿ.ಪಿ–5 ರಲ್ಲಿ ಏನು ಬರೆದಿರುತ್ತಾರೆಂದು ನನಗೆ ತಿಳಿದಿರುವುದಿಲ್ಲ. ಪೊಲೀಸರು ಸಹಿ ಮಾಡಲು ಹೇಳಿದ್ದು, ನಾನು ಸಹಿ ಮಾಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಸರ್ಕಾರಿ ಅಭಿಯೋಜಕರು ಪಾಟೀಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲುಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

ಪೊಲೀಸರು ದಿಃ 10.11.2024 ರಂದು ನಮ್ಮನ್ನು ಗಾಂಧೀ ನಗರದ ಪಾರ್ಕ್ ಬಳಿ ಕರೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯ ಕಾಲಕ್ಕೆ ಪೊಲೀಸರು ನನ್ನ ಹಾಗೂ ಚಾಸಾ–1 ರವರ ಸಮಕ್ಷಮ ಎರಡು ದೊಣ್ಣೆಗಳನ್ನು ಹಾಗೂ ಚಾಸಾ–1 ರವರ ಜುಬ್ಬವನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ

ಪೊಲೀಸರು ಪಂಚನಾಮೆಯ ಕಾಲಕ್ಕೆ ಪಂಚನಾಮೆಯನ್ನು ಜರುಗಿಸಿದ್ದು, ನಾನು ಹಾಗೂ ಮತ್ತೊಬ್ಬ ಪಂಚರಾದ ಚಾಸಾ–1 ರವರು ನಿ.ಪಿ–5 ಪಂಚನಾಮೆಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ಪೊಲೀಸರು ಸದರಿ ಪಂಚನಾಮೆಯ ಕಾಲಕ್ಕೆ ಮುದ್ದೆಮಾಲು–1 ರಿಂದ 3 ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡು ಪ್ರತ್ಯೇಕವಾಗಿ ಸೀಲ್ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ನನಗೆ ಸದರಿ ಪ್ರಕರಣದ ಬಗ್ಗೆ ಮಾಹಿತಿ ಇದ್ದು, ನನ್ನ ಸಮಕ್ಷಮ ದಿಃ 10.11.2024 ರಂದು 11.00–12.00 ಗಂಟೆಯವರೆಗೂ ನಿ.ಪಿ–5 ರಂತೆ ಪಂಚನಾಮೆಯನ್ನು ಜರುಗಿಸಿ ಪಂಚನಾಮೆಯ ಕಾಲಕ್ಕೆ ನಿ.ಪಿ–6 ಮತ್ತು 7 ರಂತೆ ಫೋಟೋವನ್ನು ತೆಗೆದು ಮುದ್ದೆಮಾಲು–1 ರಿಂದ 3 ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಸದರಿ ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಸಹಃ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**(ಪಾಟೀ ಸವಾಲುಃ 1 ರಿಂದ 4 ನೇ ಆರೋಪಿತರ ಪರ ಶ್ರೀ. ಬಿ.ಜಿ.ಕೆ ವಕೀಲರು ಹಾಜರಿದ್ದು, ಯಾವುದೇ ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.)**

**(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).**

**ಓದಿ, ಹೇಳಿ, ಕೇಳಿ, ಸರಿ ಇದೆ ಎಂದು ಒಪ್ಪಿರುತ್ತಾರೆ.**

**(ಹೇಮಂತ್ ಕುಮಾರ್ ಸಿ.ಆರ್)**
**5 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು**
**ತಿಪಟೂರು**